**ಆಲೂರಿನ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯದಲ್ಲಿ**

ಸಿಸಿ ನಂ. 2/2021.

| | | |
|---|---|---|
| ಸಾಕ್ಷಿಯ ಹೆಸರು | ಅನಂತ | ಪಿ.ಡಬ್ಲ್ಯು-3 |
| ತಂದೆಯ ಹೆಸರು | ಹನುಮೇಗೌಡ | ಸಿ.ಡಬ್ಲ್ಯು-9 |
| ವಯಸ್ಸು | 62 ವರ್ಷ | |
| ಉದ್ಯೋಗ | ವ್ಯವಸಾಯ | ದಿನಾಂಕಃ 10-08-2023 |
| ವಾಸ | ಕೆ.ಹೊಸಕೊಪ್ಪಲು ಗ್ರಾಮ , ಹಾಸನ ತಾಃ | ಪ್ರಮಾಣ ವಚನ ಬೋಧಿಸಲಾಯಿತು. |

<u>ಮುಖ್ಯ ವಿಚಾರಣೆಃ ಎಪಿಪಿ ರವರಿಂದ</u>

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಿದ್ದು , ಸಾಕ್ಷಿಯು ದಾಖಲೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆ ಅಮಾನತ್ತು ಮಹಜರ್ ಆಗಿದ್ದು , ದಾಖಲೆಯನ್ನು ನಿಪಿ-5 ಎಂದು , ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ಸದರಿ ದಾಖಲೆಗೆ ನಾನು ಒಂದೂವರೆ ವರ್ಷಗಳ ಹಿಂದೆ ಪೋಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಕೆಎ-13-ಎನ್-6066 ರ ಬೈಕ್ ನನ್ನ ಅಳಿಯ ಚಾಲನೆ ಮಾಡಿಕೊಂಡಿದ್ದು , ಸದರಿ ಬೈಕ್ ನನ್ನ ಹೆಸರಿನಲ್ಲಿರುತ್ತದೆ. ನನ್ನ ಅಳಿಯನ ಸ್ನೇಹಿತ ಆ ಬೈಕನ್ನು ನನ್ನ ಅಳಿಯನಿಂದ ತೆಗೆದುಕೊಂಡು ಹೋಗಿರುತ್ತಾರೆ. ನಂತರ ಅಪಘಾತವಾಗಿರುತ್ತದೆ ಎಂದು ಪೋಲೀಸರು ನನಗೆ ತಿಳಿಸಿದ್ದ ಮೇರೆಗೆ ನಾನು ಬೈಕನ್ನು ಠಾಣೆಗೆ ತೆಗೆದುಕೊಂಡು ಹೋಗಿರುತ್ತೇನೆ. ಅಪಘಾತದ ಯಾವ ವಿಚಾರವೂ ನನಗೆ ತಿಳಿದಿರುವುದಿಲ್ಲ. ನಿಪಿ-5 ರಲ್ಲಿರುವ ಯಾವ ವಿಚಾರಗಳು ನನಗೆ ತಿಳಿದಿರುವುದಿಲ್ಲ. ಸಾಕ್ಷಿಯು ಐ ಎಂ ವಿ ಕಾಯ್ದೆ ಕಲಂ 133 ರೀತ್ಯಾ ನೀಡಿದ ನೋಟೀಸನ್ನು ಪಡೆದಿರುವುದು ಮತ್ತು ಸದರಿ ನೋಟೀಸಿಗೆ ನೀಡಿರುವ ಉತ್ತರದ ಪ್ರತಿಯಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು , ಸದರಿ ದಾಖಲೆಗಳನ್ನು ನಿಪಿ-6 ಮತ್ತು 7 ಎಂದು , ಸಾಕ್ಷಿಯ ಸಹಿಯನ್ನು ನಿಪಿ-6(ಎ) ಮತ್ತು 7(ಎ) ಎಂದು ಗುರುತಿಸಲಾಯಿತು. ಸದರಿ ದಾಖಲೆಗಳಿಗೆ ಪೋಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಸದರಿ ದಾಖಲೆಗಳಲ್ಲಿರುವ ವಿಚಾರಗಳು ನನಗೆ ತಿಳಿದಿರುವುದಿಲ್ಲ. ನಂತರ ನ್ಯಾಯಾಲಯದ ಆದೇಶವನ್ನು ಪಡೆದು , ವಾಹನವನ್ನು ಪೋಲೀಸ್ ಠಾಣೆಯಿಂದ ಬಿಡುಗಡೆಗೊಳಿಸಿಕೊಂಡಿರುತ್ತೇನೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನೋಡಿ ಗುರುತಿಸಿರುವುದಿಲ್ಲ. ಸಾಕ್ಷಿಯು ವಾಹನ ಅಮಾನತ್ತು ಮಹಜರ್ ಪೋಟೋ ಮತ್ತು ವಾಹನ ಬಿಡುಗಡೆಗೊಳಿಸಿಕೊಂಡ ಪೋಟೋಗಳನ್ನು ನೋಡಿ ಗುರುತಿಸಿದ್ದು , ಸದರಿ

ಫೋಟೋಗಳನ್ನು ನಿಪಿ-8 ರಿಂದ 10 ಎಂದು ಗುರುತಿಸಲಾಯಿತು.

( ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಸರ್ಕಾರಿ ವಕೀಲರು ಕೇಳಿರುತ್ತಾರೆ. ಸಾಕ್ಷಿಯ ಸಾಕ್ಷ್ಯವನ್ನು ಪರಿಶೀಲಿಸಿ ಪಾಟೀ ಸವಾಲು ಮಾಡಲು ಅವಶ್ಯಕವೆಂದು ಮನಗಂಡು ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಎಪಿಪಿ ರವರಿಂದಃ-

ದಿಃ24-08-2020 ರಂದು ಅಪಘಾತದ ವಿಷಯವಾಗಿ ಪೋಲೀಸರು ನನಗೆ ತಿಳಿಸಿದ ಮೇರೆಗೆ ನನ್ನ ಬೈಕನ್ನು ನಾನೇ ಪೋಲೀಸ್ ಠಾಣೆಗೆ ತೆಗೆದುಕೊಂಡು ಹೋಗಿ ಹಾಜರುಪಡಿಸಿರುತ್ತೇನೆ ಎಂದರೆ ಸರಿ . ನನ್ನ ಬೈಕನ್ನು ನನ್ನಿಂದ ಆರೋಪಿಯು ಪಡೆದುಕೊಂಡು ಹೋಗಿ ಮತ್ತೊಂದು ಬೈಕಿಗೆ ಗುದ್ದಿಸಿದ ಪರಿಣಾಮ ಮತ್ತೊಂದು ಬೈಕಿನಲ್ಲಿದ್ದ ವ್ಯಕ್ತಿಗೆ ಅಪಘಾತವಾಗಿ ಮರಣ ಹೊಂದಿರುತ್ತಾರೆಂಬ ವಿಚಾರ ತಿಳಿದಿರುತ್ತೇನೆ ಎಂದರೆ ಸರಿಯಲ್ಲ. ಈ ವಿಚಾರ ತಿಳಿದು ನನ್ನ ಬೈಕನ್ನು ಠಾಣೆಗೆ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಪೋಲೀಸರು ನನ್ನ ಸಮಕ್ಷಮ ಬೆಳಿಗ್ಗೆ 9-30 ರಿಂದ 10-30 ರವರೆಗೆ ಮಹಜರ್ ಕ್ರಮ ಜರುಗಿಸಿ, ಚಾಸಾ-10 ಮತ್ತು 11 ರವರ ಸಮಕ್ಷಮ ವಾಹನವನ್ನು ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ. ಅಪಘಾತಕ್ಕೆ ಸಂಬಂಧಿಸಿದಂತೆ ಎಲ್ಲಾ ವಿಚಾರಗಳು ತಿಳಿದಿದ್ದು, ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ

ಆರೋಪಿ ಪರ ವಕೀಲರು ಹಾಜರಿದ್ದು , ಪಾಟೀಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,
ಆಲೂರು.